(ಇಂದು ದಿನಾಂಕಃ 20-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆಃ ಶ್ರೀ. RSK ಎದುರುದಾರರ ಪರವಕೀಲರಿಂದ**

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

- ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-1 ಎಂದು, ಗುರುತಿಸಲಾಯಿತು.
- ವಿಮೆ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-2 ಎಂದು, ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ SNB ಅರ್ಜಿದಾರ ಪರ ವಕೀಲರಿಂದಃ**

ಅಪಘಾತವಾದಾಗ ಪಾಲಿಸಿ ಚಾಲನೆಯಲ್ಲಿ ಇತ್ತು ಎಂದರೆ ಸರಿ. ಆದರೆ ಅದು ಷರತ್ತುಗಳಿಗೆ ಒಳಪಟ್ಟಿರುತ್ತದೆ. ಪ್ರಸ್ತುತ ಪ್ರಕರಣದಲ್ಲಿ ಕಾಲಮಿತಿಯನ್ನು ಮನ್ನಾ ಮಾಡಬೇಕೆಂದು ಸಲ್ಲಿಸಿದ ಅರ್ಜಿಯು ಪುರಸ್ಕರಿಸಲಾಗಿರುತ್ತದೆ ಎಂದರೆ ಸರಿ. ಆದರೆ ಅದನ್ನು ನಾವು ಪ್ರಶ್ನಿಸಿಲ್ಲ ಎಂದರೆ ಸರಿ. ವಾಹನ ಸಂಖ್ಯೆ ಕೆ.ಎ 32 ಇ.ಕೆ-9796 ನೇದ್ದರ ನಿರ್ಲಕ್ಷ್ಯ ಚಾಲನೆಯಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಎರಡೂ ವಾಹನಗಳ ನಿರ್ಲಕ್ಷ್ಯ ಚಾಲನೆಯಿಂದ ಅಪಘಾತವಾಗಿರುತ್ತದೆ. ಸಿ.ಸಿ ನಂಬರ 1098/2022 ರಲ್ಲಿ ಕ್ರೈಂ ನಂಬರ 33/2022 ನೇದ್ದರ ಎಲ್ಲಾ ದಾಖಲಾತಿಗಳನ್ನು ನೋಡಿರುತ್ತೇವೆ. ಆ ಪ್ರಕರಣದಲ್ಲಿ ಅಂತಿಮ ವರದಿಯನ್ನು ಪೋಲೀಸರು ಸರಿಯಾದ ರೀತಿಯಲ್ಲಿ ತನಿಖೆ ಮಾಡಿ ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಕೆ.ಎ-32 ಇ.ಕೆ-9796 ವಾಹನದಿಂದ ಅಪಘಾತ ವಾಗಿರುತ್ತದೆ ಎಂದು ತನಿಖಾಧಿಕಾರಿಗಳು ಸರಿಯಾಗಿ ತನಿಖೆ ಮಾಡಿ ಅಂತಿಮ ವರದಿಯನ್ನು ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಸುಳ್ಳು ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ಅಂತಿಮ ವರದಿಯನ್ನು ನಾವು ಪ್ರಶ್ನಿಸಿರುವುದಿಲ್ಲ ಎಂದರೆ ನಾವು ಆ ಪ್ರಕರಣದಲ್ಲಿ ಪಕ್ಷಗಾರರು ಇರುವುದಿಲ್ಲ. ಕೆ.ಎ-32 ಇ.ಎಚ್-1469 ನೇದ್ದರ ತಪ್ಪಿ ನಿಂದ ಅಪಘಾತವಾಗಿರುತ್ತದೆ ಎಂದು ಪೋಲೀಸರು ಅಂತಿಮ ವರದಿಯನ್ನು ಸಲ್ಲಿಸಿಲ್ಲ ಎಂದರೆ ಸುಳ್ಳು ವರದಿಯನ್ನು ಸಲ್ಲಿಸಿರುತ್ತಾರೆ. ನಮ್ಮ ಕಂಪನಿಗೆ ಒಳಪಟ್ಟ ಇನ್ಸೂರೆನ್ಸ ವಾಹನದಿಂದ ಅಪಘಾತವಾಗಿದ್ದರೂ ಪರಿಹಾರವನ್ನು ಕೊಡಬಾರದು ಅನ್ನುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಬರೆದಿರುವ ವಿಷಯಗಳು ಸುಳ್ಳು ಇರುತ್ತವೆ ಎಂದರೆ ಸರಿ ಅಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ,
ಚಿಂಚೋಳಿ.